**ದಿನಾಂಕಃ 02.02.2026 ರಂದು ಸಾಕ್ಷಿದಾರರನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ – ಪ್ರತಿವಾದಿ ಪರ ವಕೀಲರಿಂದ**

ನಾನು ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಹಾಜರು ಪಡಿಸಿದ್ದು, ಅದರಲ್ಲಿರುವ ಸಂಗತಿಗಳೆಲ್ಲಾ ಸತ್ಯವಿದ್ದು, ಅದನ್ನು ನಾನೇ ಹೇಳಿ ಬರೆಸಿದ್ದೇನೆ ಹಾಗೂ ಪ್ರಮಾಣ ಪತ್ರಕ್ಕೆ ನಾನೇ ಸಹಿ ಮಾಡಿರುತ್ತೇನೆ.

ದಿನಾಂಕಃ 01.08.2018 ರಂದು ಆಗಿರುವ ಕ್ರಯ ಬಾಬ್ತು ಒಪ್ಪಂದ ರದ್ದು ಪತ್ರದ ದೃಢೀಕೃತ ನಕಲನ್ನು ಹಾಜರು ಪಡಿಸಿದ್ದು ಅದನ್ನು ನಿಡಿ–2 ಎಂದು ಗುರುತಿಸಲಾಯಿತು. ದಿನಾಂಕಃ 01.08.2018 ರಂದು ಆಗಿರುವ ಕ್ರಯ ಒಪ್ಪಂದದ ಕರಾರು ಪತ್ರದ ದೃಢೀಕೃತ ನಕಲನ್ನು ಹಾಜರು ಪಡಿಸಿದ್ದು ಅದನ್ನು ನಿಡಿ–3 ಎಂದು ಗುರುತಿಸಲಾಯಿತು. ದಿನಾಂಕಃ 17.11.2018 ರಂದು ಸ್ವಾಧೀನ ರಹಿತ ಕ್ರಯ ಬಾಬ್ತು ಒಪ್ಪಂದದ ಕರಾರು ಪತ್ರದ ದೃಢೀಕೃತ ನಕಲನ್ನು ಹಾಜರು ಪಡಿಸಿದ್ದು ಅದನ್ನು ನಿಡಿ–4 ಎಂದು ಗುರುತಿಸಲಾಯಿತು. ಬ್ಯಾಂಕ್ ಸ್ಟೇಟ್ ಮೆಂಟನ್ನು ಹಾಜರು ಪಡಿಸಿದ್ದು ಅದನ್ನು ನಿಡಿ–5 ಎಂದು ಗುರುತಿಸಲಾಯಿತು.

**ಪ್ರತಿವಾದಿ ಪರ ವಕೀಲರು ಸಮಯಾವಕಾಶ ಕೋರಿದ್ದರಿಂದ ಮುಖ್ಯ ವಿಚಾರಣೆಯನ್ನು ಮುಂದೂಡಲಾಯಿತು.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಪಡಿಸಲಾಯಿತು.

ಓ ಹೇ ಕೇ ಸಾ ಸ ಇ ಒ

(ಸುನೀತ)
ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ ದಂ. ಕೊಳ್ಳೇಗಾಲ.